## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಭಾಗ್ಯ ಯೋಜನೆಯನ್ನು ಇಲಾಖೆಯ ಇತರೆ ಯೋಜನೆಗಳೊಂದಿಗೆ ಒಗ್ಗೂಡಿಸಿ ಅನುಷ್ಠಾನಗೊಳಿಸುವ ಬಗ್ಗೆ

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಕೃಇ 08 ಕೃಯೋಕಾ 2014, ದಿನಾಂಕ 22-07-2014.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 232 ಕೃಯೋಕಾ 2015, ಬೆಂಗಳೂರು, ದಿನಾಂಕ: 20-10-2015.
3. ದಿನಾಂಕ:23.04.2016 ರಂದು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕೃಷಿ ಭಾಗ್ಯ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.
4. ಈ ಕಚೇರಿಯ ಪತ್ರ ಸಂಖ್ಯೆ: ಉಕೃನಿ/ಕೃಭಾ/ಸ.ಪ/2016-17 ದಿನಾಂಕ: 23.04.2016.

****

ಮೇಲೆ ಓದಲಾದ (1)ರ ಆದೇಶದಲ್ಲಿ ಮಳೆಯಾಶ್ರಿತ ಕೃಷಿಯನ್ನು ಸುಧಾರಿಸುವ ನಿಟ್ಟಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು 2014-15 ಸಾಲಿನಿಂದ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಮೇಲೆ ಓದಲಾದ (2) ರ ಆದೇಶದಲ್ಲಿ ಕೃಷಿ ಭಾಗ್ಯ ಯೋಜನೆಯ ಅನುಷ್ಠಾನವನ್ನು ಸರಳಗೊಳಿಸಸಲು ಮಾರ್ಗಸೂಚಿಯಲ್ಲಿ ಹೆಚ್ಚುವರಿ ಅಂಶಗಳನ್ನು ಸೇರ್ಪಡಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿನ ಮಾನ್ಯ ಕೃಷಿ ರಾಜ್ಯ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 23.04.2016 ರಂದು ನಡೆದ ಕೃಷಿ ಭಾಗ್ಯ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ನಡವಳಿಯಲ್ಲಿ ಕೃಷಿ ಭಾಗ್ಯ ಯೋಜನೆಯ ಬಗ್ಗೆ ರೈತರಿಗೆ ಹೆಚ್ಚಿನ ಅರಿವು ಮೂಡಿದ್ದು, ಯೋಜನೆಯ ಘಟಕಗಳನ್ನು ಅನುಷ್ಠಾನಗೊಳಿಸಿ ಯಶಸ್ವಿಯಾದ ರೈತರ ಕ್ಷೇತ್ರಕ್ಕೆ ಭೇಟಿ ನೀಡಿದ ನಂತರ ಹೆಚ್ಚಿನ ರೈತರು ಯೋಜನೆಯ ಬಗ್ಗೆ ಆಸಕ್ತಿ ತೋರಿ ಅನುಷ್ಠಾನ ಮಾಡಲು ಮುಂದೆ ಬಂದಿರುತ್ತಾರೆ, ಪ್ರಯುಕ್ತ ಆಸಕ್ತ ರೈತರಿಗೆ ಕಾರ್ಯಾದೇಶ ನೀಡಲಾಗಿರುತ್ತದೆ. ಕೆಲವು ಫಲಾನುಭವಿಗಳು ಯೋಜನೆಯ ಪ್ಯಾಕೇಜ್‌ನ ಎಲ್ಲಾ ಘಟಕಗಳ ಅನುಷ್ಠಾನ ಪೂರ್ಣಗೊಳಿಸಿದ್ದು, ಕೆಲವು ಫಲಾನುಭವಿಗಳ ಕ್ಷೇತ್ರದಲ್ಲಿ ಯೋಜನೆಯ ಘಟಕಗಳ ಅನುಷ್ಠಾನ ಹಂತದಲ್ಲಿದ್ದು, ಇನ್ನು ಕೆಲವು ರೈತರ ಕ್ಷೇತ್ರದಲ್ಲಿ ಯೋಜನೆಯ ಪ್ರಾರಂಭಿಕ ಘಟಕಗಳ ಅನುಷ್ಠಾನದಲ್ಲಿರುತ್ತದೆ. ಈ ಎಲ್ಲಾ ಕಾಮಗಾರಿ/ಘಟಕ ಅನುಷ್ಠಾನಕ್ಕಾಗಿ ಹೆಚ್ಚಿನ ಅನುದಾನದ ಅವಶ್ಯಕತೆ ಇರುತ್ತದೆ. ಆದುದರಿಂದ ಕೃಷಿ ಭಾಗ್ಯ ಯೋಜನೆಯ ಅನುದಾನದೊಂದಿಗೆ, ಇಲಾಖೆಯ ಇತರೆ ಯೋಜನೆಗಳಡಿ ಲಭ್ಯವಿರುವ ಅನುದಾನವನ್ನು ಕೃಷಿ ಭಾಗ್ಯ ಯೋಜನೆಯ ಘಟಕಗಳಿಗೆ ಒಗ್ಗೂಡಿಸಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ. ಅದರಂತೆ ಸೂಕ್ತ ಸರ್ಕಾರಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ (4) ರಲ್ಲಿ ಕೃಷಿ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕೃಷಿ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 75 ಕೃಯೋಕಾ 2016, ಬೆಂಗಳೂರು,**

**ದಿನಾಂಕ: 23-04-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೃಷಿ ಭಾಗ್ಯ ಯೋಜನೆಯ ಅನುದಾನದೊಂದಿಗೆ, ಇಲಾಖೆಯ ಇತರೆ ಯೋಜನೆಗಳಡಿ ಲಭ್ಯವಿರುವ ಅನುದಾನವನ್ನು ಕೃಷಿ ಭಾಗ್ಯ ಯೋಜನೆಯ ಘಟಕಗಳಿಗೆ ಒಗ್ಗೂಡಿಸಿ, ಈ ಕೆಳಕಂಡಂತೆ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

1. ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ PMKSY-WD (Watershed Development), PMKSY-Other Interventions ಮತ್ತು PMKSY-MNREGA convergence ಯೋಜನೆಯಡಿ ಲಭ್ಯವಾಗುವ ಅನುದಾನವನ್ನು ಕೃಷಿ ಭಾಗ್ಯ ಯೋಜನೆಯ ಘಟಕಗಳಿಗೆ ಒಗ್ಗೂಡಿಸಿ ಅನುಷ್ಠಾನಗೊಳಿಸುವುದು. ಜಂಟಿ ಕೃಷಿ ನಿರ್ದೇಶಕರಿಗೆ ಬಿಡುಗಡೆಯಾಗುವ ಅನುದಾನವನ್ನು ನೇರವಾಗಿ ಯೋಜನೆಯ ಅನುಷ್ಠಾನಕ್ಕೆ ಉಪಯೋಗಿಸುವುದು.
2. ಓವರ್ ಎಕ್ಸಪ್ಲಾಯಿಟೆಡ್ 18 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸುತ್ತಿರುವ PMKSY- Other Interventions ಮತ್ತು MNREGA ಒಗ್ಗೂಡಿಸುವಿಕೆಯ ಕಾರ್ಯಕ್ರಮದ ಅನುದಾನವನ್ನು ಕೃಷಿ ಭಾಗ್ಯ ಯೋಜನೆಯ ಘಟಕಗಳಿಗೆ ಬಳಕೆ ಮಾಡುವುದು. ಅಲ್ಲದೇ, ಈ ಹಣವನ್ನು ಜಂಟಿ ಕೃಷಿ ನಿರ್ದೇಶಕರು ನೇರವಾಗಿ ವೆಚ್ಚ ಭರಿಸುವುದು.
3. ಪಾಲಿಥೀನ್ ಹೊದಿಕೆಯ ಘಟಕವನ್ನು, ಕೃಷಿ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಕೃಷಿ ಉತ್ಪನ್ನಗಳ ಸಂಸ್ಕರಣಾ ಯೋಜನೆಯ ಘಟಕದಡಿ ಒದಗಿಸಿರುವ ಅನುದಾನವನ್ನು ಬಳಸಿಕೊಂಡು ಆದ್ಯತೆ ಮೇರೆಗೆ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯ ನೀಡುವುದು.
4. ಡಿಸೇಲ್ ಪಂಪಸೆಟ್ ಘಟಕವನ್ನು, ಕೃಷಿ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ರಾಜ್ಯವಲಯ ಕೃಷಿ ಯಾಂತ್ರೀಕರಣ ಯೋಜನೆಯಡಿ ಮತ್ತು RKVY ಯೋಜನೆಗಳಲ್ಲಿ ಒದಗಿಸಿರುವ ಅನುದಾನವನ್ನು ಬಳಸಿಕೊಂಡು ಆದ್ಯತೆ ಮೇರೆಗೆ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯ ನೀಡುವುದು.
5. ಸೂಕ್ಷ್ಮ ನೀರಾವರಿ (ಹನಿ/ತುಂತುರು ನೀರಾವರಿ) ಘಟಕಕ್ಕೆ ಬೇಕಾಗುವ ಅನುದಾನವನ್ನು ಸೂಕ್ಷ್ಮ ನೀರಾವರಿ ಯೋಜನೆಯಡಿ (PMKSY) ಮತ್ತು RKVY ಯೋಜನೆಯಡಿ ಒದಗಿಸಿರುವ ಅನುದಾನವನ್ನು ಬಳಸಿಕೊಂಡು ಆದ್ಯತೆ ಮೇರೆಗೆ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯ ನೀಡುವುದು.
6. ಕೃಷಿ ಭಾಗ್ಯ ಯೋಜನೆಯಡಿ ಬೆಳೆ ಪ್ರಾತ್ಯಕ್ಷಿಕೆ ಘಟಕಕ್ಕೆ ಸಂಬಂಧಿಸಿದಂತೆ ಇಲಾಖೆ ಇತರೆ ಯೋಜನೆಗಳಾದ ಭೂಚೇತನ, NFSM, NMOOP ಹಾಗೂ ಇತರೆ ಯೋಜನೆಗಳ

ಕೆ. ಎಸ್. ಗೋಪಾಲ್.

ಪ್ರಾತ್ಯಕ್ಷಿಕೆಗಳಡಿ ಲಭ್ಯವಿರುವ ಅನುದಾನವನ್ನು ಆದ್ಯತೆ ಮೇರೆಗೆ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳಿಗೆ ನೀಡುವುದು.

ಒಟ್ಟಾರೆಯಾಗಿ, ಇಲಾಖೆಯ ವಿವಿಧ ಯೋಜನೆಗಳಲ್ಲಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ಹಾಗೂ ಕೃಷಿ ಭಾಗ್ಯ ಯೋಜನೆಯಡಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು, ಕೃಷಿ ಭಾಗ್ಯ ಯೋಜನೆಯ ವಿವಿಧ ಘಟಕಗಳನ್ನು ಅನುಷ್ಠಾನಗೊಳಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಆರ್. ಎಸ್. ಶಿವಕುಮಾರ್ 23/4/16

(ಆರ್.ಎಸ್.ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ), ಕರ್ನಾಟಕ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಇ & ಆರ್ಎಸ್ಎ), ಕರ್ನಾಟಕ, ಬೆಂಗಳೂರು.
3) ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4) ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
5) ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಅಪರ ಮುಖ್ಯ ಕಾರ್ಯದರ್ಶಿ, ಸಹಕಾರ ಇಲಾಖೆ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
9) ಆಯುಕ್ತರು/ ನಿರ್ದೇಶಕರು, ಕೃಷಿ ಆಯುಕ್ತಾಲಯ, ಶೇಷಾದ್ರಿ ರಸ್ತೆ, ಬೆಂಗಳೂರು.
10) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
11) ಆಯುಕ್ತರು/ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
12) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
13) ಎಲ್ಲಾ ಜಂಟಿ ಕೃಷಿ ನಿರ್ದೇಶಕರಿಗೆ, ಕೃಷಿ ನಿರ್ದೇಶಕರ ಮೂಲಕ.
14) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

15) ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ
16) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ.
17) ಸರ್ಕಾರದ ಜಂಟಿ ಕಾರ್ಯದರ್ಶಿ, ಕೃಷಿ ಇಲಾಖೆ ರವರ ಆಪ್ತ ಸಹಾಯಕರು,
18) ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ ರವರ ಆಪ್ತ ಸಹಾಯಕರು,
19) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.